## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.58/2023

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಬಸವರಾಜಪ್ಪ | CW: 2 | PW: 2 |
| ತಂದೆಯ ಹೆಸರು | : | ಷಡಾಕ್ಷರಪ್ಪ | | |
| ವಯಸ್ಸು | : | 64 | | |
| ವೃತ್ತಿ | : | ಕೂಲಿ | | |
| ವಾಸಸ್ಥಳ | : | ಗೋವಿನಕೋವಿ | | |

ದಿನಾಂಕಃ 04.03.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ - ಮಾನ್ಯ ಸ.ಸ.ಅ.ರವರಿಂದಃ-

ಆರೋಪಿಗಳು ಗೊತ್ತಿಲ್ಲ. ಚಾಸಾ 1, 3 ಮತ್ತು 4 ರವರು ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನಾನು ಯಾವುದೇ ಗಲಾಟೆ ನೋಡಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನಾನು ಮನೆಯಿಂದ ಜಮೀನಿಗೆ ಹೋಗುತ್ತಿದ್ದಾಗ ಪೋಲೀಸರು ಕರೆದು ಸಹಿ ಪಡೆದುಕೊಂಡಿರುತ್ತಾರೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ.

ಸಾಕ್ಷಿಯು 2 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಸಾಕ್ಷಿಯು ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆಗಳಲ್ಲಿ ಸಾಕ್ಷಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸ್ಥಳ ಪಂಚನಾಮೆಯನ್ನು ನಿಪಿ 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ 3(ಎ) ಎಂದು, ಕಚ್ಚಾ ನಕಾಶೆಯನ್ನು ನಿಪಿ 4 ಎಂದು, ಸಾಕ್ಷಿಯ ಸಹಿಯನ್ನು ನಿಪಿ 4(ಎ) ಎಂದು ಗುರುತಿಸಲಾಯಿತು. 2 ಪೋಟೋಗಳನ್ನು ನಿಪಿ 5 ಮತ್ತು 6 ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿಃ 14.09.2022 ರಂದು ಮಧ್ಯಾಹ್ನ 12.30 ರ ಸಮಯದಲ್ಲಿ ನಾನು ನಮ್ಮ ಜಮೀನಿಗೆ ಹೇಗುತ್ತಿದ್ದಾಗ 1 ನೇ ಆರೋಪಿಯ ಜಮೀನಿನಲ್ಲಿ 1 ಮತ್ತು 2 ನೇ ಆರೋಪಿಗಳು ಕೆಲಸ ಮಾಡುತ್ತಿದ್ದು ಆ ಸಮಯದಲ್ಲಿ ಚಾಸಾ 1 ರವರು ಅವರ ಜಮೀನಿಗೆ ಹೋಗುತ್ತಿದ್ದಾಗ ಆರೋಪಿಗಳೆಲ್ಲರೂ ಚಾಸಾ 1 ರವರನ್ನು ತಡೆದು ನಿಲ್ಲಿಸಿದರು ಎಂದರೆ ಸರಿಯಲ್ಲ. ಆಗ 1 ನೇ ಆರೋಪಿಯು ಚಾಸಾ 1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಹಾಗೂ ಆರೋಪಿಗಳೆಲ್ಲರೂ ಚಾಸಾ 1 ರವರನ್ನು ಕೆಳಗೆ ಬೀಳಿಸಿಕೊಂಡು ಚಾಸಾ 1 ರವರ ಮೈಕೈಗೆ ಹೊಡೆದು ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಚಾಸಾ 1 ರವರಿಗೆ ಆರೋಪಿಗಳೆಲ್ಲರೂ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಅಲ್ಲಿಯೇ ಇದ್ದ ನಾನು, ಚಾಸಾ 3 ಮತ್ತು 4 ರವರು ಜಗಳ ಬಿಡಿಸಿದೆವು ಎಂದರ ಸರಿಯಲ್ಲ.

ದಿಃ 18.09.2022 ರಂದು ನಾನು ಸ್ಥಳ ತೋರಿಸಿದ ಮೇರೆಗೆ ಪೋಲೀಸರು ಘಟನಾ ಸ್ಥಳಕ್ಕೆ ಬೇಟಿ ನೀಡಿ ನನ್ನ , ಚಾಸಾ 5 ಮತ್ತು 6 ರವ ರ ಸಮಕ್ಷಮ ಬೆಳಗ್ಗೆ 10 ರಿಂದ 10.45 ರವರೆಗೆ ನಿಪಿ 3 ರಂತೆ ಸ್ಥಳ ಪಂಚನಾಮೆ ಜರುಗಿಸಿ ಆ ಸಮಯದಲ್ಲಿ ಕಚ್ಚಾ ನಕಾಶೆ ತಯಾರಿಸಿ , ನಿಪಿ 5 ಮತ್ತು 6 ರಂತೆ ಪೋಟೋ ತೆಗೆದರು ಎಂದರೆ ಸರಿಯಲ್ಲ. ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 7 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿಗಳ ಪರ ವಕೀಲರಿಂದಃ-</u>

ಆರೋಪಿಗಳ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.